# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 677(791)

ಮಾನ್ಯ ಸದಸ್ಯರ ಹೆಸರು: ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 18.08.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 05 ವರ್ಷದಿಂದ ಇಲ್ಲಿಯವರೆಗೂ ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ: ಹಾಗಿದ್ದಲ್ಲಿ ಶಾಲೆಗಳನ್ನು ಮುಚ್ಚಲು ಇರುವ ಕಾರಣಗಳೇನು: | ರಾಜ್ಯದಲ್ಲಿ ಕಳೆದ 05 ವರ್ಷದಿಂದ ಇಲ್ಲಿಯವರೆಗೂ 'ಯಾವುದೇ ಪ್ರಾಥಮಿಕ ಶಾಲೆಗಳನ್ನು ಮುಚ್ಚಿರುವುದಿಲ್ಲ. ಮಕ್ಕಳ ದಾಖಲಾತಿ ಶೂನ್ಯವಾದಲ್ಲಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ, ಮುಂದೆ ಮಕ್ಕಳು ದಾಖಲಾದಲ್ಲಿ ಶಾಲೆಯನ್ನು ಪುನರ್ ಆರಂಭಿಸಲಾಗುತ್ತಿದೆ.<br><br>2023-24ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆ ಹುಲಿಕಲ್ ತುರುವೇಕೆರೆ ತಾ. ತುಮಕೂರು ಜಿಲ್ಲೆ ಈ ಶಾಲೆಯನ್ನು ವಿದ್ಯಾರ್ಥಿಗಳ ದಾಖಲಾತಿ ಕೊರತೆಯಿಂದ ಮುಚ್ಚಿದೆ. |
| ಆ) | ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಸರ್ಕಾರಿ ಶಾಲೆಗಳಿವೆ ಇವುಗಳಲ್ಲಿ ಎಷ್ಟು ಶಾಲೆಗಳು ತೆರೆದಿವೆ; ಎಷ್ಟು ಶಾಲೆಗಳು ಮುಚ್ಚಲ್ಪಟ್ಟಿದೆ ಮಾಹಿತಿ ನೀಡುವುದು; | ರಾಜ್ಯದಲ್ಲಿ ಒಟ್ಟು 41279 ಸರ್ಕಾರಿ ಪ್ರಾಥಮಿಕ ಶಾಲೆಗಳು ಇರುತ್ತವೆ.<br><br>ಯಾವುದೇ ಪ್ರಾಥಮಿಕ ಶಾಲೆಯನ್ನು ಮುಚ್ಚಿರುವುದಿಲ್ಲ. ಮಕ್ಕಳ ದಾಖಲಾತಿಗೆ ಶೂನ್ಯವಾದಲ್ಲಿ ತಾತ್ಕಾಲಿವಾಗಿ ಸ್ಥಗಿತಗೊಳಿಸಿ, ಮುಂದೆ ಮಕ್ಕಳು ದಾಖಲಾದಲ್ಲಿ ಶಾಲೆಯನ್ನು ಪುನರ್ ಆರಂಭಿಸಲಾಗುತ್ತಿದೆ.<br><br>ರಾಜ್ಯದಲ್ಲಿ ಪ್ರಸ್ತುತ ಇರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ: 4871. |

| | | |
|---|---|---|
| | | 2023-24ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆ ಹುಲಿಕಲ್ ತುರುವೇಕೆರೆ ತಾ. ತುಮಕೂರು ಜಿಲ್ಲೆ ಈ ಶಾಲೆಯನ್ನು ವಿದ್ಯಾರ್ಥಿಗಳ ದಾಖಲಾತಿ ಕೊರತೆಯಿಂದ ಮುಚ್ಚಿದೆ. |
| ಇ) | ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ನಿರ್ಧಾರದಿಂದ ವಿದ್ಯಾರ್ಥಿಗಳು, ಹಿಂದುಳಿದ ಕುಟುಂಬಗಳ ಮಕ್ಕಳು ಮತ್ತು ವಿಶೇಷವಾಗಿ ಬಾಲಕಿಯರ ಮೇಲೆ ಪರಿಣಾಮ ಬೀರುವುದಿಲ್ಲವೇ; | ಈಗಾಗಲೇ 1 ಕಿ ಮೀ ವ್ಯಾಪ್ತಿಯೊಳಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು ಹಾಗೂ 3 ಕಿ ಮೀ ವ್ಯಾಪ್ತಿಯೊಳಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಲಾಗಿದ್ದು ದಾಖಲಾತಿಗೆ ಅರ್ಹವಿರುವ ಮಕ್ಕಳನ್ನು ಶಾಲೆಯಿಂದ ಹೊರಗುಳಿಯದಂತೆ ಶಾಲೆಗೆ ದಾಖಲು ಮಾಡಲಾಗಿರುತ್ತದೆ. ಇದರಿಂದ ಹಿಂದುಳಿದ ಕುಟುಂಬಗಳ ಮಕ್ಕಳು ಮತ್ತು ವಿಶೇಷವಾಗಿ ಬಾಲಕಿಯರ ಮೇಲೆ ಪರಿಣಾಮ ಬೀರುವುದಿಲ್ಲ. |
| ಈ) | ಈ ಶಾಲೆಗಳನ್ನು ಮುಚ್ಚುವ ಬದಲು, ಸರ್ಕಾರವು ಮಕ್ಕಳನ್ನು ಶಾಲೆಯ ಕಡೆ ಕರೆತರಲು, ಶಾಲೆಗಳಿಗೆ ಹೆಚ್ಚು ಅನುದಾನ ನೀಡಿ, ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಸರ್ಕಾರವು ಮಕ್ಕಳನ್ನು ಶಾಲೆಯ ಕಡೆ ಕರೆತರಲು ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನ್ನಭಾಗ್ಯ, ಕ್ಷೀರಭಾಗ್ಯ, ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಶೂ ಮತ್ತು ಸಾಕ್ಸ್ ಮುಂತಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>ಒಟ್ಟು 8535 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಇರುವ ಕನ್ನಡ /ಇತರೆ ಮಾಧ್ಯಮದ ಜೊತೆಗೆ ಆಂಗ್ಲ (ದ್ವಿಭಾಷಾ) (Bilingual) ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ. 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿ ಯಿಂದ 59 ಸರ್ಕಾರಿ ಕಿರಿಯ ಪ್ರಾಥಮಿಕ ಪ್ರಾಥಮಿಕ ಶಾಲೆಗಳನ್ನು ಹಿರಿಯ ಶಾಲೆಗಳನ್ನಾಗಿ ಮತ್ತು 91 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 7ನೇ ತರಗತಿಯನ್ನು 8ನೇ ತರಗತಿಯನ್ನಾಗಿ ಉನ್ನತೀಕರಿಸಲಾಗಿದೆ.<br>ಮುಂದುವರೆದು, ಶಾಲಾ ಕೊಠಡಿ/ ಶೌಚಾಲಯ ನಿರ್ಮಾಣ, ದುರಸ್ಥಿ, ನಿರ್ವಹಣೆಗಾಗಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. |

| | | |
|---|---|---|
| ಉ) | ಶಾಲೆಗಳನ್ನು ಮುಚ್ಚಿದ್ದಲ್ಲಿ, ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ನಿಯೋಜನೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಯಾವುದೇ ಶಾಲೆಯಲ್ಲಿ ಶೂನ್ಯ ದಾಖಲಾತಿಯಿರುವ ಶಾಲೆಯಲ್ಲಿ ಇರುವ ಶಿಕ್ಷಕರನ್ನು ಹೆಚ್ಚುವರಿ ಎಂದು ಗುರುತಿಸಿ ಜೇಷ್ಠತೆಯ ಆಧಾರದಲ್ಲಿ ತಾಲ್ಲೂಕು/ ಜಿಲ್ಲಾ ಹಂತದಲ್ಲಿ ಶಿಕ್ಷಕರ ಅಗತ್ಯತೆ ಇರುವ ಶಾಲೆಗಳಿಗೆ ಶಿಕ್ಷಕರಿಗೆ ತೊಂದರೆಯಾಗದ ರೀತಿಯಲ್ಲಿ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗುವುದು. |

**ಇಪಿ 95 ಪಿಎಂಎ 2025**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು